**ಹೆಚ್ಚುವರಿ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿಸಿ ನಂ. 1048/2022**

| | | | |
|---|---|---|---|
| **ಹೆಸರು** | : | **ಲಕ್ಷ್ಮೀ** | ಚಾ.ಸಾ.1 |
| **ಗಂಡನ ಹೆಸರು** | : | **ನಾಗಪ್ಪ** | ಪ್ರಾ.ಸಾ. 2 |
| **ವಯಸ್ಸು** | : | **34 ವರ್ಷ** | ದಿನಾಂಕ: 04-02-2025 |
| **ಉದ್ಯೋಗ** | : | **ಒಕ್ಕಲುತನ** | |
| **ವಾಸಸ್ಥಳ** | : | **ತೆಗಲತಿಪ್ಪಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಸಹಾಯಕ ಸರಕಾರಿ ಅಭಿಯೋಜಕರಿಂದ:**

ಚಾಸಾ 6 ರಿಂದ 8 ರವರು ನನಗೆ ಗೊತ್ತಿಲ್ಲ. ಮೃತ ನಾಗಪ್ಪ ನನ್ನ ಗಂಡ. 1ನೇ ಆರೋಪಿ ನನಗೆ ಗೊತ್ತಿಲ್ಲ. ಚಾಸಾ 3, ಚಾಸಾ 4 ಮತ್ತು 5 ರವರು ನನಗೆ ಗೊತ್ತಿಲ್ಲ.

ನನ್ನ ಗಂಡ ಹೇಗೆ ಮೃತಪಟ್ಟಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

ಈಗ 3-4 ವರ್ಷಗಳ ಹಿಂದೆ ನನ್ನ ಗಂಡ ಮೃತಪಟ್ಟಿರುತ್ತಾನೆ. ನಾನು ಚಿಂಚೋಳಿ ಸರಕಾರಿ ಆಸ್ಪತ್ರೆಗೆ ಹೋದಾಗ ನನ್ನ ಗಂಡ ಮೃತಪಟ್ಟಿರುತ್ತಾರೆ. ಈಗ ನೋಡುತ್ತಿರುವ ಭಾವಚಿತ್ರಗಳಲ್ಲಿರುವ ಮೃತವ್ಯಕ್ತಿ ನನ್ನ ಗಂಡ. ಸದರಿ ಭಾವಚಿತ್ರಗಳನ್ನು ನಿಪಿ 3 ಮತ್ತು 4 ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದೇ. ಸದರಿ ದಾಖಲೆಯನ್ನು ನಿಪಿ 5 ಎಂದು ಮತ್ತು ನನ್ನ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ನಿಪಿ 5 ರಲ್ಲಿ ಎಲ್ಲಿ ಸಹಿ ಮಾಡಿದ್ದೇನೆ ಎಂದು ನನಗೆ ಗೊತ್ತಿಲ್ಲ. ನನ್ನ ಗಂಡ ಮೃತಪಟ್ಟ ಕಾರಣ ನಾನು ಸಹಿ ಮಾಡಿರುತ್ತೇನೆ.

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ದೂರಿಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲು: ಸಹಾಯಕ ಸರಕಾರಿ ಅಭಿಯೋಜಕರಿಂದ:**

ಚಾಸಾ 6 ರಿಂದ 8 ರವರು ನನ್ನ ಗಂಡನ ಚಿಕ್ಕಪ್ಪಂದಿರು ಎಂದರೆ ಸರಿ. ಚಾಸಾ 6 ರಿಂದ 8 ರವರು ನನಗೆ ಕರೆಮಾಡಿದ್ದರು ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಚಾಸಾ 6 ರಿಂದ 8 ರವರು ನನಗೆ ಕರೆಮಾಡಿ ಆಟೋ ಪಲ್ಟಿಯಾದ ಕಾರಣ ನನ್ನ ಗಂಡನಿಗೆ ಭಾರಿ ರಕ್ತಗಾಯಗಳಾಗಿವೆ ಎಂದು ನನಗೆ ತಿಳಿಸಿರುತ್ತಾರೆ

ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಆರೋಪಿ ತನ್ನ ಆಟೋವನ್ನು ಅತಿವೇಗ ಮತ್ತು ನಿರ್ಲಕ್ಷ್ಯತನದಿಂದ ಚಲಾಯಿಸಿ ಒಮ್ಮೆಲೆ ಬ್ರೇಕಾ ಹಾಕಿದ ಕಾರಣ ಆಟೋ ನಿಯಂತ್ರಣ ತಪ್ಪಿ ರಸ್ತೆ ಬದಿಗೆ ಬಿದ್ದ ಕಾರಣ ನನ್ನ ಗಂಡನ ತಲೆ ಆಟೋ ಕೆಳಗೆ ಸಿಕ್ಕಿಕೊಂಡು ಮೆದಳು ಹೊರಗೆ ಬಂದಿರುತ್ತದೆ ಎಂದು ನನಗೆ ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಚಾಸಾ 3 ರವರು ಬರೆದಿರುವ ದೂರಿಗೆ ನಾನು ಸಹಿ ಮಾಡಿದ್ದೇನೆ ಎಂದರೆ ಸಾಕ್ಷಿ ಅವರು ಯಾರು ಎಂದು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ನನ್ನ ಗಂಡ ರಸ್ತೆ ಅಪಘತದಲ್ಲಿ ಮೃತಪಟ್ಟಿರುತ್ತಾರೆ ಎಂದರೆ ಸರಿ. ಈ ರೀತಿ ನಾನು ದೂರು ಕೊಟ್ಟಿದ್ದೇನೆ ಎಂದರೆ ಸಾಕ್ಷಿ ನಾನು ಯಾವುದೇ ದೂರು ನಿಡಿಲ್ಲ ಎಂದು ನುಡಿಯುತ್ತಾರೆ. ಆರೊಪಿ ಮಾತುಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ NHR ವಕೀಲರಿಂದಃ ಇಲ್ಲಾ.**

**ಮರುವಿಚಾರಣೆಃ ಇಲ್ಲಾ.**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**C/C ಹೆಚ್ಚುವರಿ ಪ್ರ.ದ.ನ್ಯಾ.ದಂ. ಚಿಂಚೋಳಿ**